ಕರ್ನಾಟಕ ಸರ್ಕಾರ

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.10/2021**

ಪಿ.ಡಬ್ಲ್ಯೂಃ **9**

ಸಿ.ಡಬ್ಲ್ಯೂಃ 11

| | | |
|---|---|---|
| ಹೆಸರು | ಃ | ರಾಜೇಶ್ ಎಸ್ |
| ತಂದೆಯ ಹೆಸರು | ಃ | ಲೇಟ್ ಶ್ಯಾಮ್ |
| ವಯಸ್ಸು | ಃ | 49 ವರ್ಷ |
| ಉದ್ಯೋಗ | ಃ | ಹೆಚ್ ಸಿ |
| ವಾಸಸ್ಥಳ | ಃ | ಕಳಸ |

ಸಾಕ್ಷಿಯು ವೀಡಿಯೋ ಕಾನ್ಫರೆನ್ಸ್ ಮೂಲಕ ನ್ಯಾಯಾಲಯದ ಮುಂದೆ ಹಾಜರಾಗಿರುತ್ತಾರೆ.

**ದಿನಾಂಕಃ06-05-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಸ.ಸ.ಅ. ರವರಿಂದ.**

**2017** ರಿಂದ ಸೆಪ್ಟೆಂಬರ್ **2020** ರವರೆಗೆ ನಾನು ಲಿಂಗದಹಳ್ಳಿ **ಪೋಲೀಸ್ ಠಾಣೆಯಲ್ಲಿ** ಪೊಲೀಸ್ ಮುಖ್ಯ ಪೇದೆಯಾಗಿ **ಆಗಿ ಕರ್ತವ್ಯ** ನಿರ್ವಹಿಸಿರುತ್ತೇನೆ.

ದಿನಾಂಕಃ 29-06-2020 ರಂದು ನಾನು ಲಿಂಗದಹಳ್ಳಿ ಪೊಲೀಸ್ ಠಾಣೆಯಲ್ಲಿ ಎಸ್ ಹೆಚ್ ಓ ಕರ್ತವ್ಯದಲ್ಲಿದ್ದಾಗ ನನಗೆ ಲಿಂಗದಹಳ್ಳಿ ಸರ್ಕಾರಿ ಆಸ್ಪತ್ರೆಯಿಂದ ಮಾಹಿತಿ ಬಂದ ಮೇರೆಗೆ ನಾನು ಲಿಂಗದಹಳ್ಳಿ ಸರ್ಕಾರಿ ಆಸ್ಪತ್ರೆಗೆ ಹೋಗಿ ಗಾಯಾಳು ನನ್ನ ಸಮಕ್ಷಮದಲ್ಲಿ ಹೇಳಿದಂತೆ ದಿನಾಂಕಃ 29-06-2020 ರಂದು 2-00 ಗಂಟೆಯಿಂದ 2-30 ರವರೆಗೆ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ನಂತರ ಗಾಯಾಳುಗೆ ಓದಿ ಹೇಳಿ ಅವರ ಸಹಿ ಪಡೆದುಕೊಂಡು ಠಾಣೆಗೆ 2-45 ಗಂಟೆಗೆ ಬಂದು ಠಾಣಾ ಮೊಕದ್ದಮೆ ಸಂಖ್ಯೆ 83/2020 ಕಲಂ. 447, 504, 354, 323, 324, 506 ಐಪಿಸಿ ಅಡಿಯಲ್ಲಿ ಕೇಸನ್ನು ದಾಖಲಿಸಿ ಆರೋಪಿಯ ವಿರುದ್ಧ ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಘನ ನ್ಯಾಯಾಲಯಕ್ಕೆ ನಿವೇದಿಕೊಂಡಿರುತ್ತೇನೆ.

ದಿಃ 30-06-2020 ರಂದು ಚಾಸಾ-10 ಹಾಗೂ ನಾನು ಚಾಸಾ-2 ಮತ್ತು 3 ರವರನ್ನು ಬರಮಾಡಿಕೊಂಡು ಅವರಿಗೆ ಪ್ರಕರಣದ ಬಗ್ಗೆ ಮಾಹಿತಿ ತಿಳಿಸಿ ಪಂಚರಾಗಿ ಬರಮಾಡಿಕೊಂಡು ಅವರಿಗೆ ನೋಟೀಸ್ ಜಾರಿ ಮಾಡಿ ಅವರ ಸಮಕ್ಷಮದಲ್ಲಿ 4-45 ರಿಂದ 5-30 ರವರೆಗೆ ಮಹಜರ್

ಕ್ರಮವನ್ನು ಜರುಗಿಸಿರುತ್ತೇನೆ. ನಂತರ ಪಂಚರ ಸಮಕ್ಷಮ ಚಾಸಾ-1 ರವರು ತೋರಿಸಿದ ಒಂದು ಹಿಡಿಗಾತ್ರದ ಕಲ್ಲನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ. ನಂತರ ಠಾಣೆಗೆ ಬಂದು ಠಾಣಾ ಪಿ ಎಫ್ ನಂ. 58/2020 ರಲ್ಲಿ ಸದರಿ ಮುದ್ದೆ ಮಾಲನ್ನು ನಮೂದಿಸಿ ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-12 ರವರಿಗೆ ವಹಿಸಿಕೊಟ್ಟಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ದೂರು ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಪ್ರಥಮ ವರ್ತಮಾನ ವರದಿ ಆಗಿದ್ದು , ಸದರಿ ದಾಖಲೆಯನ್ನು ನಿಪಿ-8 ಎಂದು, ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು , ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-3 ಮತ್ತು 4 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು : ಆರೋಪಿತರ ಪರ** ಶ್ರೀ ಬಿ ಟಿಕೆ **ವಕೀಲರಿಂದ.**

ಆರೋಪಿ ಹಾಗೂ ಚಾಸಾ-1 ರವರ ಗಂಡ ಅಣ್ಣ ತಮ್ಮಂದಿರು ಆಗಿದ್ದು, ಅವರ ಮಧ್ಯೆ ಜಮೀನಿನ ವಿಚಾರವಾಗಿ ವ್ಯಾಜ್ಯಗಳು ಇದೆ ಎಂದರೆ ಸರಿ. ಚಾಸಾ-1 ರವರ ಚಿತಾವಣೆ ಮೇರೆಗೆ ಆರೋಪಿ ಮೇಲೆ ಸುಳ್ಳು ಪ್ರಥಮ ವರ್ತಮಾನ ವರದಿ ತಯಾರು ಮಾಡಿರುತ್ತೀರಾ ಎಂದರೆ ಸರಿಯಲ್ಲ. ನೀವು ಯಾವುದೇ ಸ್ಥಳಕ್ಕೆ ಹೋಗಿಲ್ಲ, ಮಹಜರ್ ಕ್ರಮವನ್ನು ಜರುಗಿಸಿರುವುದಿಲ್ಲ,

ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-2 ಮಹಜರ್ ನ್ನು ಠಾಣೆಯಲ್ಲೇ ಕುಳಿತು ತಯಾರು ಮಾಡಿರುತ್ತಿರಾ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಆರೋಪಿ ಮೇಲೆ ಸುಳ್ಳು ಪ್ರಥಮ ವರ್ತಮಾನ ವರದಿ ತಯಾರು ಮಾಡಿರುತ್ತಿರಾ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1 ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ. ರವರು, ತರೀಕೆರೆ.**